ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬೃಬೆಂಮಪಾ/ಕಾ.ಅ(ಬ್ಯಾ.ವಿ)/ಆ.ಅ/143/11-12

ಕಾರ್ಯಪಾಲಕ ಅಭಿಯಂತರರ ಕಛೇರಿ
ಬ್ಯಾಟರಾಯನಪುರ ವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬೆಂಗಳೂರು-92, ದಿನಾಂಕ:

ತಾಂತ್ರಿಕ ಮಂಜೂರಾತಿ

ವಿಷಯ:- Improvements to road at UAS Apartment Road in Ward No. 09 SD.

ಉಲ್ಲೇಖ:1. ಕಾರ್ಯಪಾಲಕ ಅಭಿಯಂತರರ ಆಡಳಿತಾತ್ಮಕ ಅನುಮೋದನೆ ಬೃಬೆಂಮಪಾ/ಕಾ.ಅ(ಬ್ಯಾ.ವಿ)/ಆ.ಅ/143/08-09

2. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ ಕಾಮಗಾರಿ ಸಂಕೇತ: ಸಂಖ್ಯೆ: 009-11-000059

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬ್ಯಾಟರಾಯನಪುರ/ಕೊಡಿಗೇಹಳ್ಳಿ/ವಿದ್ಯಾರಣ್ಯಪುರ ಉಪವಿಭಾಗ) ರವರು 2010-11ನೇ ಸಾಲಿನ ಕೆ.ಪಿ.ಡಬ್ಲ್ಯೂ.ಡಿ ಎಸ್.ಆರ್. ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಯಲಹಂಕ ವಲಯಕ್ಕೆ 2010-11ನೇ ಸಾಲಿನ POW General work ಲೆಕ್ಕಶೀರ್ಷಿಕೆ P1771 zone works-POW Worksರ ಅನುದಾನದಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ. 9.50 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಜಂಟಿ ಆಯುಕ್ತರು ಬ್ಯಾಟರಾಯನಪುರ ವಲಯ ರವರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(6/ಪಿ.ಆರ್/394/07-08 ದಿನಾಂಕ:29-08-2007 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿ ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಪುಸ್ತಕ ಪುಟ ಸಂಖ್ಯೆ:38 ಕ್ರ.ಸಂ:143 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ. 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸದ ಪುಸ್ತಕದಲ್ಲಿ (Road History/ Register) ಈ ಕೆಲಸದ ವಿವರಗಳನ್ನು ದಾಖಲಿಸಿ, ಕ್ರಮಬದ್ಧಗೊಳಿಸುವುದು.
3. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡ್ಯಾಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
6. ಆರ್.ಸಿ.ಸಿ. ಡೆಕ್ ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
7. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
8. ಬಿ.ಎಂ / ಬಿ.ಸಿ ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶಗಳ ವರದಿಗಳನ್ನು ಪಡೆದುಕೊಳ್ಳುವುದು.
9. ಸದರಿ ಕೆಲಸವು ಎಂಬ್ಯಾಂಕ್‌ಮೆಂಟ್/ ಕಾಂಕ್ರೀಟ್/ಡಾಂಬರೀಕರಣ - ಬಿಎಂ - ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT&H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ

ಪ್ರತಿಯನ್ನು:

1. ಜಂಟಿ ಆಯುಕ್ತರು, ಬ್ಯಾಟರಾಯನಪುರ ವಲಯ ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
2. ಮುಖ್ಯ ಅಭಿಯಂತರರು, ಬ್ಯಾಟರಾಯನಪುರ ವಲಯ ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ/ಕೊಡಿಗೇಹಳ್ಳಿ/ವಿದ್ಯಾರಣ್ಯಪುರ ಉಪವಿಭಾಗ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
4. ಮುಖ್ಯ ಲೆಕ್ಕಾಧಿಕಾರಿಗಳು, ಬಿಬಿಎಂಪಿ ರವರಿಗೆ ಮಾಹಿತಿಗಾಗಿ ಕಳುಹಿಸಿದೆ.